**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**ಸಿ.ಮಿಸ್.ನಂಃ 996/2025**

ಸಾಕ್ಷಿಯನ್ನು ದಿನಾಂಕಃ 03.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. ಬಿ.ವಿ.ಎಸ್. ವಕೀಲರಿಂದಃ**

ನಾನು ಈ ಅರ್ಜಿಯಲ್ಲಿ **1 ನೇ ಅರ್ಜಿದಾರನಾಗಿರುತ್ತೇನೆ.** ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ.

ಎದುರುದಾರರು ನೀಡಿರುವ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, ಎದುರುದಾರರು ಜರುಗಿಸಿದ ಮಹಜರ್ ನ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು, ದಿನಾಂಕಃ 14.01.2026 ರ **ಪ್ರಜಾನುಡಿ** ಮತ್ತು **ಹಲೋ ಮೈಸೂರು** ದಿನಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-4 ಮತ್ತು ನಿ.ಪಿ.-5** ಎಂದು, ಪತ್ರಿಕಾ ಪ್ರಕಟಣೆಗಳನ್ನು ಕ್ರಮವಾಗಿ **ನಿ.ಪಿ.-4(ಎ) ಮತ್ತು ನಿ.ಪಿ.-5(ಎ)** ಎಂದು, 02 ಆಧಾರ್ ಕಾರ್ಡ್ ಗಳ ನೋಟರಿ ಧೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-6 ಮತ್ತು ನಿ.ಪಿ.-7** ಎಂದು ಗುರುತಿಸಲಾಯಿತು. ಸದರಿ ದಾಖಲೆಗಳನ್ನು ಗಮನಿಸಿ ನನ್ನ ಅರ್ಜಿಯನ್ನು ಪುರಸ್ಕರಿಸಿಕೊಳ್ಳಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಎದುರುದಾರರು ಏಕಪಕ್ಷೀಯವಾಗಿರುತ್ತಾರೆ. ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಲಾಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**C/c 1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**